ನಿರ್ಧರಿಸಿದೆಯೇ?, ಹಾಗಿದ್ದಲ್ಲಿ ಎಷ್ಟು ಪರಿಹಾರಧನವನ್ನು ನೀಡಲು ನಿರ್ಧರಿಸಲಾಗಿದೆ, ಇದಕ್ಕಾಗಿ ಯಾವ ಅಳತೆಗೋಲನ್ನು ಅಳವಡಿಸಿಕೊಳ್ಳಲಾಗಿದೆ?

ಶ್ರೀ ಎಂ.ಮಹದೇವು (ರೇಷ್ಮೆ ಮತ್ತು ಜವಳಿ ಸಚಿವರು):

1) ಇಲ್ಲ.

2) ಕಾನೂನು ರೀತ್ಯಾ ಪರಿಶೀಲಿಸಲಾಗುವುದು.

ದೊಡ್ಡಬಳ್ಳಾಪುರ ನಗರಸಭೆಯ ಮತದಾರರ ಪಟ್ಟಿಯ ಪರಿಷ್ಕರಣೆ.

276(548)

ಶ್ರೀ ವಿ.ಕೃಷ್ಣಪ್ಪ(ದೊಡ್ಡಬಳ್ಳಾಪುರ); ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ನಗರಸಭೆಗೆ ಸಂಬಂಧಪಟ್ಟಂತೆ ವಾರ್ಡುಗಳಲ್ಲಿ ಮತದಾರರ ವಿಂಗಡಣೆಯಲ್ಲಿ ಭಾರೀ ಅಸಮತೋಲನ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ವಾರ್ಡುಗಳ ಗಡಿಯನ್ನು ಸಮನಾಗಿ ಗುರುತಿಸಿ, ಪ್ರತಿ ವಾರ್ಡುಗಳಿಗೂ ಮತದಾರರನ್ನು ಸರಿ-ಸಮನಾಗಿ ನಿಗದಿಪಡಿಸಲು ತೆಗೆದುಕೊಂಡ ಕ್ರಮಗಳೇನು? ನಿಯಮಾವಳಿಗಳ ವಿವರ ನೀಡುವುದು?

ಶ್ರೀ ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು):

ಅ) -ಇಲ್ಲ-

ಆ) ವಾರ್ಡುಗಳ ಗಡಿಗಳ ವಿಂಗಡಣೆಯನ್ನು ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಪರಿಚ್ಛೇದ 13ರಲ್ಲಿನಂತೆ ಮಾಡಲಾಗಿದೆ. ಪ್ರಸ್ತುತ 1991ರ ಜನಗಣತಿಯನ್ನು ಆಧಾರವಾಗಿಟ್ಟುಕೊಂಡು ವಾರ್ಡುಗಳ ಗಡಿ ವಿಂಗಡಣೆ ಮಾಡಲಾಗಿರುತ್ತದೆ.

ತೆಲಗೌಂಡರ್ ಜನಾಂಗದ ಬಗ್ಗೆ.

278(96)

ಶ್ರೀ ಕೃಷ್ಣಮೂರ್ತಿ ಕೆ.ಎಂ.(ಕಡೂರು): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆಯ ಕಡೂರು ಮತ್ತು ತರೀಕೆರೆ ತಾಲ್ಲೂಕಿನಲ್ಲಿ ನೆಲೆಸಿರುವ ತೆಲಗೌಂಡರ್ ಜನಾಂಗದವರು ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಈ ಸಮುದಾಯದವರು ಶೈಕ್ಷಣಿಕವಾಗಿ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿರುವಿಕೆಯನ್ನು ನೀಗುವ ವಿಷಯದಲ್ಲಿ ಸರಕಾರ ಕೈಗೊಂಡ ಕ್ರಮಗಳೇನು;

ಇ) ಈ ಸಮಾಜವನ್ನು ಹಿಂದುಳಿದ ವರ್ಗದವರ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ರವಿವರ್ಮಾ ಹಿಂದುಳಿದ ಆಯೋಗದಲ್ಲಿ ಅವಕಾಶ ಕಲ್ಪಿಸಲಾಗಿದೆಯೆ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಚಿಕ್ಕಮಗಳೂರು ಜಿಲ್ಲೆಯ ಕಡೂರು ಮತ್ತು ತರೀಕೆರೆ ತಾಲ್ಲೂಕಿನಲ್ಲಿ ನೆಲೆಸಿರುವ ತೆಲಗೌಂಡರ್ ಜನಾಂಗದವರಿಂದ, ಅವರ ಹಿಂದುಳಿದಿರುವಿಕೆ ಬಗೆಗೆ ಯಾವ ಮನವಿಯೂ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ವಣ್ಣೂರ ಗ್ರಾಮದಲ್ಲಿ ಆಶ್ರಮ ಶಾಲೆ ಪ್ರಾರಂಭಿಸುವುದು.

279(230)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆಯಲ್ಲಿ ಎಷ್ಟು ಆಶ್ರಮ ಶಾಲೆಗಳು ಇರುತ್ತದೆ;